## ಕರ್ನಾಟಕ ಸರ್ಕಾರದ ನಡವಳಿಗಳು

**ವಿಷಯ:**- ಶ್ರೀ ಎಂ.ಎಸ್.ಬಿರಾದಾರ ಪಾಟೀಲ್, ಹಿಂದಿನ ಕಾರ್ಯನಿರ್ವಾಹಕ ಅಧಿಕಾರಿ, ತಾಲ್ಲೂಕು ಪಂಚಾಯತ್, ಚಿಕ್ಕೋಡಿ, ಹಾಗೂ ಶ್ರೀ ಎ.ಎಸ್.ಬೋರಗಾಂವಿ, ಹಿಂದಿನ ಪಂಚಾಯತ್ ಅಭಿವೃದ್ಧಿ ಅಧಿಕಾರಿ(ಪ್ರಭಾರ) ಚಿಕ್ಕಲವಾಳ ಗ್ರಾಮ ಪಂಚಾಯತಿ, ಇವರುಗಳ ವಿರುದ್ಧದ ಜಂಟಿ ಇಲಾಖಾ ವಿಚಾರಣೆ-ವಿಚಾರಣಾಧಿಕಾರಿ ಮತ್ತು ಮಂಡನಾಧಿಕಾರಿಯವರ ನೇಮಕ ಮಾಡುವ ಬಗ್ಗೆ ಆದೇಶ.

**ಓದಲಾಗಿದೆ:**-1. ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿ, ಜಿಲ್ಲಾ ಪಂಚಾಯತ್ ಬೆಳಗಾವಿ, ಇವರ ಪತ್ರ ಸಂಖ್ಯೆ:ಜಿಪಂ/ಸಿಬ್ಬಂದಿ/ವಿವ-43/2013-14, ದಿನಾಂಕ: 26.07.2013

2. ಸರ್ಕಾರದ ಸಮ ಸಂಖ್ಯೆಯ ಕಾರಣ ಕೇಳುವ ನೋಟೀಸ್ ದಿನಾಂಕ:11-11-2013
3. ಶ್ರೀ ಎಂ.ಎಸ್.ಬಿರಾದಾರ ಪಾಟೀಲ್, ಕಾರ್ಯನಿರ್ವಾಹಕ ಅಧಿಕಾರಿ, ತಾಲ್ಲೂಕು ಪಂಚಾಯತ್, ಚಿಕ್ಕೋಡಿ ರವರ ಲಿಖಿತ ರಕ್ಷಣಾ ಹೇಳಿಕೆ ದಿನಾಂಕ:28.11.2013
4. ಶ್ರೀ ಎ.ಎಸ್.ಬೋರಗಾಂವಿ, ಹಿಂದಿನ ಪ್ರಭಾರಿ ಪಂಚಾಯತ್ ಅಭಿವೃದ್ಧಿ ಅಧಿಕಾರಿ, ಚಿಕ್ಕಳವಾಳ ಗ್ರಾಮ ಪಂಚಾಯಿತಿ(ಪ್ರಸ್ತುತ ಗ್ರೇಡ್-2 ಕಾರ್ಯದರ್ಶಿ, ವಾಳಕಿ) ಚಿಕ್ಕೋಡಿ, ರವರ ಲಿಖಿತ ರಕ್ಷಣಾ ಹೇಳಿಕೆ ದಿನಾಂಕ: 27.11.2013.
5. ಸರ್ಕಾರದ ಸಮಸಂಖ್ಯೆಯ ಪತ್ರ ದಿನಾಂಕ: 31.01.2014.
6. ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿ, ಜಿಲ್ಲಾ ಪಂಚಾಯತ್ ಬೆಳಗಾವಿ, ಇವರ ಪತ್ರ ಸಂಖ್ಯೆ:ಜಿಪಂ/ಸಿಬ್ಬಂದಿ/ವಿವ-45/2013-14, ದಿನಾಂಕ: 04.06.2014

****

**ಪ್ರಸ್ತಾವನೆ:**

ಬೆಳಗಾವಿ ಜಿಲ್ಲೆಯ ಚಿಕ್ಕೋಡಿ ತಾಲ್ಲೂಕಿನ ಚಿಕ್ಕಲವಾಳ ಗ್ರಾಮ ಪಂಚಾಯತಿ ವ್ಯಾಪ್ತಿಯ ಪಾಂಗೇರಿ ಗ್ರಾಮದಲ್ಲಿ 2011-12ನೇ ಸಾಲಿನಲ್ಲಿ 09 ಎಕರೆ ಗಾಯರಾಣ ಜಮೀನಿನಲ್ಲಿ ನಿವೇಶನಗಳನ್ನು ಬಡವರಿಗೆ ಹಂಚಿಕೆ ಮಾಡುವ ಮಂಜೂರು ಮಾಡಿದ್ದರೂ ಸಹ, ನಿವೇಶನಗಳನ್ನು ಫಲಾನುಭವಿಗಳಿಗೆ ಹಂಚಿಕೆ ಮಾಡಲು ಆಸಕ್ತಿ ತೋರಿಸದೆ, ಕರ್ತವ್ಯಲೋಪವೆಸಗಿದ್ದ ಕಾರಣ ಹಾಗೂ ಫಲಾನುಭವಿಗಳಿಂದ ಅಕ್ರಮವಾಗಿ ವಂತಿಕೆಯನ್ನು ಪಡೆದಿರುವ ಆರೋಪದ ಮೇರೆಗೆ ಚಿಕ್ಕೋಡಿ ತಾಲ್ಲೂಕು ಪಂಚಾಯತ್‌ನ ಹಿಂದಿನ ಕಾರ್ಯನಿರ್ವಾಹಕ ಅಧಿಕಾರಿಯಾದ ಶ್ರೀ ಎಂ.ಎಸ್.ಬಿರಾದಾರ ಪಾಟೀಲ್ ಹಾಗೂ ಹಿಂದಿನ ಪ್ರಭಾರಿ ಪಂಚಾಯತ್ ಅಭಿವೃದ್ಧಿ ಅಧಿಕಾರಿ, ಚಿಕ್ಕಳವಾಳ ಗ್ರಾಮ ಪಂಚಾಯಿತಿ ಚಿಕ್ಕೋಡಿ ತಾಲ್ಲೂಕು, ಶ್ರೀ ಎ.ಎಸ್.ಬೋರಗಾಂವಿ ಇವರುಗಳಿಗೆ

ಕರ್ನಾಟಕ ನಾಗರೀಕ ಸೇವಾ (ವರ್ಗೀಕರಣ ನಿಯಂತ್ರಣ ಮತ್ತು ಮೇಲ್ಮನವಿ ನಿಯಮಾವಳಿಗಳು 1957ರ ನಿಯಮ 11 ರ ಪ್ರಕಾರ ಮೇಲೆ (2)ರಲ್ಲಿ ಓದಲಾದ ದಿನಾಂಕ:11.11.2013 ರಂದು ಕಾರಣ ಕೇಳುವ ನೋಟೀಸ್ಸಿನೊಂದಿಗೆ ಅನುಬಂಧ 1-4 ನ್ನು ಜಾರಿಗೊಳಿಸಲಾಗಿತ್ತು. ಸದರಿ ನೋಟೀಸಿಗೆ ಅಧಿಕಾರಿ/ನೌಕರರು ಮೇಲೆ 3 ಮತ್ತು 4 ರಲ್ಲಿ ಓದಲಾದ ಪತ್ರಗಳಲ್ಲಿ, ಅವರ ಲಿಖಿತ ಹೇಳಿಕೆಯನ್ನು ಸಲ್ಲಿಸಿ ಅವರ ವಿರುದ್ಧದ ಎಲ್ಲಾ ಆರೋಪಗಳನ್ನು ಅಲ್ಲಗಳೆಯುತ್ತಾ, ತಮ್ಮ ಮೇಲಿನ ಉದ್ದೇಶಿತ ಇಲಾಖಾ ವಿಚಾರಣೆಯನ್ನು ಕೈಬಿಡುವಂತೆ ಕೋರಿರುತ್ತಾರೆ.

ಈ ಅಧಿಕಾರಿ/ನೌಕರರು ನೀಡಿರುವ ರಕ್ಷಣಾ ಹೇಳಿಕೆಯ ಬಗ್ಗೆ ಬೆಳಗಾವಿ ಜಿಲ್ಲಾ ಪಂಚಾಯತ್‌ನ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿರವರ ಅಭಿಪ್ರಾಯವನ್ನು ಕೋರಲಾಗಿ, ಮೇಲೆ ಕ್ರ.ಸಂ.6 ರಲ್ಲಿ ಓದಲಾದ ಪತ್ರದಲ್ಲಿ ವಸತಿ ಯೋಜನೆಯಡಿಯಲ್ಲಿ ಸರ್ಕಾರವು ಹೊರಡಿಸಿದ್ದ ನಿರ್ದೇಶನಗಳನ್ನು ಹಾಗೂ ಜಿಲ್ಲಾ ಪಂಚಾಯತ್‌ದಿಂದ ಕಾಲಕಾಲಕ್ಕೆ ನೀಡಲಾದ ಸಲಹೆ ಸೂಚನೆಗಳನ್ನು ಅನುಸರಿಸದೇ ಆಂತರಿಕವಾಗಿ ಸ್ವ-ಹಿತಾಸಕ್ತಿ ದೃಷ್ಟಿ ಆಧರಿಸಿ ಯೋಜನೆ ವಿಫಲಗೊಳಿಸಲು ಸಂಬಂಧಿಸಿದ ಅಧಿಕಾರಿಗಳು ನಿಯಮಗಳನ್ನು ಉಲ್ಲಂಘನೆ ಮಾಡಿ ಕರ್ತವ್ಯ ಲೋಪವೆಸಗಿದ್ದು ಸ್ಪಷ್ಟವಿದೆ ಎಂದು ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿ, ಜಿಲ್ಲಾ ಪಂಚಾಯತ್, ಬೆಳಗಾವಿ ಇವರು ತಿಳಿಸಿರುತ್ತಾರೆ. ಆದುದರಿಂದ ಅಧಿಕಾರ/ನೌಕರರುಗಳ ವಿರುದ್ಧದ ಆರೋಪಗಳ ಸತ್ಯಾಸತ್ಯೆಯನ್ನು ತಿಳಿಯಲು ವಿವರವಾದ ಇಲಾಖಾ ವಿಚಾರಣೆಯನ್ನು ನಡೆಸಲು, ಸರ್ಕಾರವು ತೀರ್ಮಾನಿಸಿದೆ. ಆದುದರಿಂದ ಈ ಕೆಳಕಂಡ ಆದೇಶ.

**ಸರ್ಕಾರದ ಆದೇಶ ಸಂಖ್ಯೆ: ಗ್ರಾಅಪ 173 ವಿಸೇಚಿ 2013 ಬೆಂಗಳೂರು**
**ದಿನಾಂಕ:05-11-2014**

ಶ್ರೀ ಎಂ.ಎಸ್.ಬಿರಾದಾರ ಪಾಟೀಲ್, ಹಿಂದಿನ ಕಾರ್ಯನಿರ್ವಾಹಕ ಅಧಿಕಾರಿ, ತಾಲ್ಲೂಕು ಪಂಚಾಯತ್, ಚಿಕ್ಕೋಡಿ, ಹಾಗೂ ಶ್ರೀ ಎ.ಎಸ್.ಬೋರಗಾಂವಿ, ಹಿಂದಿನ ಪ್ರಭಾರಿ ಪಂಚಾಯತ್ ಅಭಿವೃದ್ಧಿ ಅಧಿಕಾರಿ, ಚಿಕ್ಕಳವಾಳ ಗ್ರಾಮ ಪಂಚಾಯಿತಿ, ಚಿಕ್ಕೋಡಿ ತಾಲ್ಲೂಕು ಇವರುಗಳ ವಿರುದ್ಧ ಕರ್ನಾಟಕ ನಾಗರೀಕ ಸೇವಾ(ವರ್ಗೀಕರಣ, ನಿಯಂತ್ರಣ, ಮತ್ತು ಮೇಲ್ಮನವಿ), ನಿಯಮಾವಳಿಗಳು 1957ರ ನಿಯಮ 11ರ ಪ್ರಕಾರ ಅದೇ ನಿಯಮಾವಳಿಗಳ ನಿಯಮ 13 ರನ್ವಯ ಜಂಟಿ ಇಲಾಖಾ ವಿಚಾರಣೆಯನ್ನು ನಡೆಸಲು, ಸದರಿ ನಿಯಮಾವಳಿಗಳ ನಿಯಮ -11 (2) ರ ಅನುಸಾರ ಶ್ರೀ ಎ.ಎಂ.ಪತ್ತಾರ, ನಿವೃತ್ತ ಜಿಲ್ಲಾ ಮತ್ತು ಸತ್ರ ನ್ಯಾಯಾಧೀಶರು, ಬೆಳಗಾವಿ, ಇವರನ್ನು ವಿಚಾರಣಾಧಿಕಾರಿಯನ್ನಾಗಿ ಹಾಗೂ ಅದೇ ನಿಯಮಾವಳಿಗಳ ನಿಯಮ-11(5)(ಸಿ)ರ ಪ್ರಕಾರ ಸಹಾಯಕ ಕಾರ್ಯದರ್ಶಿ, (ಆಡಳಿತ) ಜಿಲ್ಲಾ ಪಂಚಾಯತ್, ಬೆಳಗಾವಿ ಇವರನ್ನು ಮಂಡನಾಧಿಕಾರಿಯನ್ನಾಗಿ ಸರ್ಕಾರವು ನೇಮಿಸಿದೆ.

ವಿಚಾರಣಾಧಿಕಾರಿಯವರು ಈ ಇಲಾಖಾ ವಿಚಾರಣೆಯನ್ನು ಕರ್ನಾಟಕ ನಾಗರೀಕ ಸೇವಾ (ವರ್ಗೀಕರಣ, ನಿಯಂತ್ರಣ ಮತ್ತು ಮೇಲ್ಮನವಿ), ನಿಯಮಾವಳಿಗಳು-1957ರ ನಿಯಮ-11ರಲ್ಲಿ ನಿಗಧಿಪಡಿಸಿರುವ ಕಾರ್ಯವಿಧಾನ ಅನುಸರಿಸಿ ವಿಚಾರಣೆ ಜರುಗಿಸಿ ವಿಚಾರಣಾ ವರದಿಯನ್ನು ಮೂರು ತಿಂಗಳೊಳಗಾಗಿ ಸರ್ಕಾರಕ್ಕೆ ಸಲ್ಲಿಸತಕ್ಕದ್ದು.

ವಿಚಾರಣಾಧಿಕಾರಿಗಳು ಇಲಾಖಾ ವಿಚಾರಣಾ ವರದಿಯನ್ನು ಸರ್ಕಾರಕ್ಕೆ ಸಲ್ಲಿಸಿದ ನಂತರ ನಿಯಮ್ಮಾನುಸಾರ ಸಂಭಾವನೆಯನ್ನು ಪಡೆಯಲು ಅರ್ಹರಿರುತ್ತಾರೆ.

ಕರ್ನಾಟಕ ರಾಜ್ಯಪಾಲರ ಆದೇಶಾನುಸಾರ ಮತ್ತು
ಅವರ ಹೆಸರಿನಲ್ಲಿ

(ನಾಗರಾಜ್.ಆರ್)
ಸರ್ಕಾರದ ಅಧೀನ ಕಾರ್ಯದರ್ಶಿ,
ಗ್ರಾಮೀಣಾಭಿವೃದ್ಧಿ ಮತ್ತು ಪಂ.ರಾಜ್ ಇಲಾಖೆ.

ಇವರಿಗೆ,
1) ಮಹಾಲೇಖಪಾಲರು, ಕರ್ನಾಟಕ ಬೆಂಗಳೂರು.
2) ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿ, ಜಿಲ್ಲಾ ಪಂಚಾಯತ್, ಬೆಳಗಾವಿ.
3) ಶ್ರೀ ವಿ.ಎಂ.ಪತ್ತಾರ, ನಿವೃತ್ತ ಜಿಲ್ಲಾ ಮತ್ತು ಸತ್ರ ನ್ಯಾಯಾಧೀಶರು, ಬೆಳಗಾವಿ.
4) ಸಹಾಯಕ ಕಾರ್ಯದರ್ಶಿ,(ಆಡಳಿತ) ಜಿಲ್ಲಾ ಪಂಚಾಯತ್, ಬೆಳಗಾವಿ ಜಿಲ್ಲೆ.

ಪ್ರತಿ ಮಾಹಿತಿಗಾಗಿ:
1) ಮಾನ್ಯ ಗ್ರಾಮೀಣಾಭಿವೃದ್ಧಿ ಮತ್ತು ಪಂ. ರಾಜ್ ಸಚಿವರ ಆಪ್ತ ಕಾರ್ಯದರ್ಶಿ, ವಿಧಾನ ಸೌಧ, ಬೆಂಗಳೂರು
2) ಸರ್ಕಾರದ ಅಪರ ಮುಖ್ಯ ಕಾರ್ಯದರ್ಶಿ/ಕಾರ್ಯದರ್ಶಿ (ಪಂ.ರಾಜ್)/ ಅಪರ ಕಾರ್ಯದರ್ಶಿ (ಆಡಳಿತ) ರವರ ಆಪ್ತ ಶಾಖೆ, ಗ್ರಾಮೀಣಾಭಿವೃದ್ಧಿ ಮತ್ತು ಪಂ. ರಾಜ್ ಇಲಾಖೆ.
3) ಮೇಲ್ವಿಚಾರಕರು, ಗಣಕ ಕೋಶ, ಗ್ರಾಮೀಣಾಭಿವೃದ್ಧಿ ಮತ್ತು ಪಂ. ರಾಜ್ ಇಲಾಖೆ.
4) ಶಾಖಾ ರಕ್ಷಾ ಕಡತ / ಹೆಚ್ಚುವರಿ ಪ್ರತಿಗಳು.